ಡಾ ಮನಮೋಹನ್ ಸಿಂಗ್
ಬೆಂಗಳೂರು ನಗರ ವಿಶ್ವವಿದ್ಯಾನಿಲಯ

ಆಗು ನೀ ಅನಿಕೇತನ
BE BOUNDLESS

Dr. Manmohan Singh
Bengaluru City University

Central College Campus, Dr. AmbedkarVeedhi,Bengaluru – 560 001.
Ph.No. 080- 22131385 email-registrar@bcu.ac.in

---

ಸಂಖ್ಯೆ: ಡಾ.ಮ.ಮೋ.ಸಿ.ಬೆಂ.ನ.ವಿ/ಕು.ಸ.ಆ/ರ.ಶಿ/2026–27/041 ದಿನಾಂಕ: 15–07–2026

**ಸುತ್ತೋಲೆ**

ವಿಷಯ: ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳಲ್ಲಿ ಯುವ ರೆಡ್‌ಕ್ರಾಸ್ ಘಟಕದ ಮೂಲಕ ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಸಹಯೋಗದಲ್ಲಿ ಪ್ರಥಮ ಆದ್ಯತೆಯ ಮೇರೆಗೆ ಸ್ವಯಂಸೇವಾ ರಕ್ತದಾನ ಶಿಬಿರಗಳನ್ನು ಆಯೋಜಿಸುವ ಕುರಿತು.

ಉಲ್ಲೇಖ: 1. ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕರವರ ಪತ್ರದ ಸಂಖ್ಯೆ: IRCS/APL-3661/26-27 Dated: 04-07-2026.

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 13–07–2026.

*****

ಮೇಲೆ ಓದಲಾದ ಉಲ್ಲೇಖದಲ್ಲಿ ತಿಳಿಸಿದಂತೆ ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯು ಸಂಸತ್ತಿನ XVನೇ ಕೇಂದ್ರ ಅಧಿನಿಯಮ– 1920ರಡಿ ಸ್ಥಾಪಿತವಾದ ಸಂಸ್ಥೆಯಾಗಿರುತ್ತದೆ. ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ 7 ಮೂಲಭೂತ ತತ್ವಗಳಾದ ಮಾನವೀಯತೆ, ನಿಷ್ಪಕ್ಷಪಾತ, ತಟಸ್ಥತೆ, ಸ್ವಾತಂತ್ರ್ಯ, ಸ್ವಯಂಸೇವೆ, ಸಾರ್ವತ್ರಿಕತೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದೆ. ರಾಷ್ಟ್ರ ಮಟ್ಟದಲ್ಲಿ ಭಾರತದ ರಾಷ್ಟ್ರಪತಿಗಳು ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಅಧ್ಯಕ್ಷರಾಗಿರುತ್ತಾರೆ. ಇದರ ಕೇಂದ್ರ ಕಛೇರಿಯು ನವದೆಹಲಿಯಲ್ಲಿರುತ್ತದೆ. ದೇಶದ ಒಟ್ಟು 29 ರಾಜ್ಯಗಳು ಹಾಗೂ 8 ಕೇಂದ್ರಾಡಳಿತ ಪ್ರದೇಶಗಳಲ್ಲಿ 2000ಕ್ಕೂ ಹೆಚ್ಚಿನ ಜಿಲ್ಲಾ ಮತ್ತು ತಾಲ್ಲೂಕು ಉಪ ಶಾಖೆಗಳ ಮೂಲಕ ವಿಕೋಪ ಸಂಧರ್ಭಗಳಲ್ಲಿ ಸಂಕಷ್ಟಗಳ ನಿವಾರಣೆ ಮತ್ತು ಆರೋಗ್ಯ ಆರೈಕೆ ಸೇವೆಗಳು, ರಕ್ತ ಸಂಗ್ರಹಣೆ ಮತ್ತು ರಕ್ತ ನಿಧಿಯ ನಿರ್ವಹಣೆ ಮುಂತಾದ ಮಾನವೀಯ ಸೇವೆಗಳನ್ನು ಸಲ್ಲಿಸುತ್ತಿದೆ.

ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆಯು 1921ರಲ್ಲಿ ಸ್ಥಾಪಿಸಲ್ಪಟ್ಟಿದೆ. ಬೆಂಗಳೂರು ಇದರ ಕೇಂದ್ರ ಕಛೇರಿಯಾಗಿದ್ದು, ಕರ್ನಾಟಕ ರಾಜ್ಯದ ಘನತೆವೆತ್ತ ರಾಜ್ಯಪಾಲರು ಸಂಸ್ಥೆಯ ಅಧ್ಯಕ್ಷರಾಗಿರುತ್ತಾರೆ. ಈ ಶಾಖೆಯು 2021 ಕ್ಕೆ ತನ್ನ ನೂರು ವರ್ಷಗಳ ಸಾರ್ಥಕ ಸೇವೆಯನ್ನು ಪೂರೈಸಿದೆ.

ಆದ್ದರಿಂದ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಎಲ್ಲಾ ಸಂಯೋಜಿತ ಕಾಲೇಜುಗಳಲ್ಲಿ ಯುವ ರೆಡ್‌ಕ್ರಾಸ್ ಘಟಕಗಳು ಪ್ರಥಮ ಆದ್ಯತೆ ಮೇರೆಗೆ ಸ್ವಯಂಸೇವಾ ರಕ್ತದಾನ ಶಿಬಿರಗಳನ್ನು ಕಡ್ಡಾಯವಾಗಿ ಆಯೋಜಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ರಕ್ತದಾನ ಶಿಬಿರಗಳನ್ನು ಆಯೋಜಿಸಲು ಶ್ರೀ ಆನಂದ್, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ, ಮೊ.ಸಂ. 8147182172 ಇವರನ್ನು ಸಂಪರ್ಕಿಸುವುದು.

ಕುಲಸಚಿವರು

ಕುಲಸಚಿವರು (ಆ)
ಡಾ. ಮನಮೋಹನ್ ಸಿಂಗ್
ಬೆಂಗಳೂರು ನಗರ ವಿಶ್ವವಿದ್ಯಾಲಯ
ಬೆಂಗಳೂರು - 560 001

ಗೆ

ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು

ಪ್ರತಿಗಳು:

1. ಪ್ರಧಾನ ಕಾರ್ಯದರ್ಶಿಗಳು, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕರ್ನಾಟಕ.
2. ಮಾನ್ಯ ಕುಲಪತಿಗಳ/ಕುಲಸಚಿವರ ಆಪ್ತ ಕಾರ್ಯದರ್ಶಿಗಳು, ಡಾ.ಎಂಎಸ್‌ಬಿಸಿಯು.
3. ನೋಡಲ್ ಅಧಿಕಾರಿಗಳು, ಯುವ ರೆಡ್‌ಕ್ರಾಸ್ ಕೋಶ, ಡಾ.ಎಂಎಸ್‌ಬಿಸಿಯು.
4. ಕಛೇರಿ ಪ್ರತಿ.